**ಅಸಲು ದಾವ ಸಂಖ್ಯೆಃ 635/2011**

**ಪಿಡಬ್ಲೂ -1**

**ಗೌರವಾನ್ವಿತ 2 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ಬೆಳಗಾವಿ.**

**ದಿಃ 22-03-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು. ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ. D.D.P ವಕೀಲರಿಂದ.**

ನಾನು ನನ್ನ ಮುಂದುವರೆದ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದ ಸಂಗತಿಗಳು ನಿಜವಾಗಿರುತ್ತದೆ . ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತದೆ.

ದಿಃ30-09-2015 ರಂದು ಭರಮಾಜಿ ಮತ್ತು ಇತರರು ಹಾಗೂ ರಮೇಶ ಹಿರಾಮಣಿ ಕಂಗ್ರಾಳಕರ ನಡುವೆ ಆದ Consent Deed ನ ದೃಡೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-10 ಎಂದು ಗುರುತಿಸಲಾಯಿತು. ಅಂಬೇವಾಡಿ ಗ್ರಾಮದ ಸರ್ವೆ ನಂಬರ 131/5 ರ 2015-16 ನೇ ಸಾಲಿನ ಗಣಕೀಕೃತ ಪಹಣಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-11 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ 6 ಪೋಟೋಗಳನ್ನು ಹಾಗೂ ಒಂದು ರಶೀದಿ ಮತ್ತು ಸಿ.ಡಿ.ಯನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ ನಿಪಿ-19 ಎಂದು ಗುರುತಿಸಲಾಯಿತು. ಖಾತೆ ನಂಬರ 218 ರ ಕಂದಾಯ ರಶೀದಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-20 ಎಂದು ಗುರುತಿಸಲಾಯಿತು. ಖಾತೆ ನಂಬರ 600 ಎ ರ ಕಂದಾಯ ರಶೀದಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-21 ಎಂದು ಗುರುತಿಸಲಾಯಿತು.ಖಾತೆ ನಂಬರ 217, 218 ರ ಕಂದಾಯ ರಶೀದಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-22

ಎಂದು ಗುರುತಿಸಲಾಯಿತು. ಖಾತೆ ನಂಬರ 151 ರ 2015-16 ನೇ ಸಾಲಿನ ಖಾತೆಯ ದೃಡೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-23 ಎಂದು ಗುರುತಿಸಲಾಯಿತು. ಗ್ರಾಮ ಲೆಕ್ಕಾಧಿಕಾರಿಯವರು ನೀಡಿದ ಅಂಬೇವಾಡಿ ಗ್ರಾಮದ ರಿ.ಸ. ನಂಬರ 131 ರ ಹಾತ ನಕಾಶೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-24 ಎಂದು ಗುರುತಿಸಲಾಯಿತು. ರಿ.ಸ.ನಂಬರ 131/5 ರ ಹಿಡುವಳಿ ದಾಖಲೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-25 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನಲ್ಲಿರುವ ಮೋಟರಗೆ ಸಂಬಂಧಿಸಿದಂತೆ 3 ವಿದ್ಯುತ್ ಬಿಲ್ ಗಳ ಪಾವತಿ ರಶೀದಿಯನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ಕ್ರಮವಾಗಿ ನಿಪಿ-26 ರಿಂದ 28 ಎಂದು ಗುರುತಿಸಲಾಯಿತು. ಅಂಬೇವಾಡಿ ಗ್ರಾಮದ ಸರ್ವೆ ನಂಬರ 131/5 ರ 2012-13 ನೇ ಸಾಲಿನ ಗಣಕೀಕೃತ ಪಹಣಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-29 ಎಂದು ಗುರುತಿಸಲಾಯಿತು. M.R.No.H8/2012-13 ರ ಹಕ್ಕು ಬದಲಾವಣೆ ವಹಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-30 ಎಂದು ಗುರುತಿಸಲಾಯಿತು.

ಪ್ರತಿವಾದಿಯರ ಪರ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲಿಗೆ ಮುಂದೂಡಲಾಯಿತು.

**(ಸಾಕ್ಷಿಯ ಹೇಳಿಕೆಯನ್ನು ತೆ.ನ್ಯಾ.ದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿಯಿದೆ.**

**ಸಹಿ/-**

**2 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು,**

**ಬೆಳಗಾವಿ.**